## ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಜೆಎಂಎಫ್‌ಸಿ ನ್ಯಾಯಾಲಯ, ಕೆಜಿಎಫ್

## ಸಿ.ಸಿ.ನಂ.238/2023

ಚಾಸಾ:16 ಪ್ರಾಸಾ:9

ದಿನಾಂಕಃ 29.04.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು- | ಶ್ರುತಿ |
| ಗಂಡನ ಹೆಸರು- | ಅಮರ್ |
| ವಯಸ್ಸು - | 33 ವರ್ಷ |
| ಉದ್ಯೋಗ- | ಪಿ.ಎಸ್.ಐ, ಪಿ.ಟಿ.ಸಿ., ಕಲಬುರ್ಗಿ ಮಹಾ ವಿದ್ಯಾಲಯ |
| ವಾಸ- | ಕಲಬುರ್ಗಿ |

**(ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ )**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

1. ನಾನು ನವೆಂಬರ್ 2020 ರಿಂದ ಜನವರಿ 2023 ರವರೆಗೆ ಆರ್ ಪೇಟೆ ಪೋಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿನಾಂಕ 11.07.2022 ರಂದು ಸಂಜೆ 5.45 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿರುವಾಗ ಚಾಸಾ-1 ರವರು ಠಾಣೆಗೆ ಹಾಜರಾಗಿ ಒಂದು ಗಣಕೀಕೃತ ದೂರನ್ನು ಸಲ್ಲಿಸಿದ ಮೇರೆಗೆ ನಾನು ಅದನ್ನು ಸ್ವೀಕರಿಸಿ ನಮ್ಮ ಠಾಣಾ ಮೊಕದ್ದಮೆ ಸಂಖ್ಯೆ 107/2022 ರಲ್ಲಿ ಪ್ರಕರಣ ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಹಾಗೂ ಅದರ ಪ್ರತಿಗಳನ್ನು ನಮ್ಮ ಮೇಲಾಧಿಕಾರಿಗಳಿಗೆ ಸಲ್ಲಿಸಿರುತ್ತೇನೆ.

3. ನಂತರ ಅದೇ ದಿನ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ಕೊಟ್ಟು ಸಂಜೆ 6.15 ರಿಂದ 7.00 ಗಂಟೆಯವರೆಗೆ ಚಾಸಾ-2 ಮತ್ತು 3 ರವರ ಸಮಕ್ಷಮ ಸ್ಥಳ ಪಂಚನಾಮೆ ಜರುಗಿಸಿರುತ್ತೇನೆ.

4. ನಂತರ ದಿನಾಂಕ 12.07.2022 ರಂದು ಪ್ರಕರಣದ ಮುಂದಿನ ತನಿಖೆಗಾಗಿ ನಾನು ಪ್ರಕರಣದ ಕಡತವನ್ನು ಚಾಸಾ-18 ರವರಿಗೆ ವಹಿಸಿಕೊಟ್ಟಿರುತ್ತೇನೆ.

5. ಈಗ ನನಗೆ ತೋರಿಸಿದ ನಿಪಿ-1 ದಾಖಲೆಯು ಚಾಸಾ-1 ರವರು ನನಗೆ ಸಲ್ಲಿಸಿದ ದೂರು ಆಗಿದ್ದು ಅದರ ಮೇಲೆ ಇರುವ ನನ್ನ ಸಹಿಯನ್ನು ನಿಪಿ-**1**(ಡಿ) ಎಂದು ಗುರುತಿಸಲಾಯಿತು.

6. ಈಗ ನನಗೆ ತೋರಿಸಿದ ದಾಖಲೆಯು ನಾನು ಪ್ರಕರಣ ದಾಖಲಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿದ ಪ್ರಥಮ ವರ್ತಮಾನ ವರದಿಯಾಗಿದ್ದು ಅದನ್ನು ಈಗ ನಿಪಿ-**16** ಹಾಗೂ ಅದರ ಮೇಲೆ ಇರುವ ನನ್ನ ಸಹಿಯನ್ನು ನಿಪಿ-**16**(ಎ) ಎಂದು ಗುರುತಿಸಲಾಯಿತು.

7. ಈಗ ನನಗೆ ತೋರಿಸಿದ ನಿಪಿ–2 ದಾಖಲೆಯು ನಾನು ಜರುಗಿಸಿದ ಸ್ಥಳ ಪಂಚನಾಮೆ ಆಗಿದ್ದು ಅದರ ಮೇಲೆ ಇರುವ ನನ್ನ ಸಹಿಯನ್ನು ನಿಪಿ–2(ಡಿ) ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿ ಚಾಸಾ–9 ರವರ ಸಹಿ ಇದ್ದು ಮತ್ತು ನಾನು ಅದನ್ನು ನೋಡಿ ಗುರುತಿಸಿದ್ದು ಸದರಿ ಸಹಿಯನ್ನು ಈಗ ನಿಪಿ–2(ಇ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 2 ನೇ ಆರೋಪಿ ಪರ ಶ್ರೀ ಎ.ಜಿ. ವಕೀಲರಿಂದಃ**

8. ನಿಪಿ–1 ದೂರಿನಲ್ಲಿ ಆರೋಪಿಯ ಹೆಸರು ಇರುವುದಿಲ್ಲ ಮತ್ತು ನಾನು ಪ್ರಕರಣವನ್ನು ಅನಾಮಧೇಯ ವ್ಯಕ್ತಿಯ ಮೇಲೆ ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿ. ಚಾಸಾ–1 ರವರು ನನಗೆ ಯಾವುದೇ ದೂರು ಸಲ್ಲಿಸಿರುವುದಿಲ್ಲ ಮತ್ತು ನಾನು ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸ್ಥಳಕ್ಕೆ ಭೇಟಿ ಕೊಟ್ಟಿಲ್ಲ ಮತ್ತು ಪಂಚನಾಮೆ ಜರುಗಿಸಿಲ್ಲ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 1 ನೇ ಆರೋಪಿ ಪರವಾಗಿ ಶ್ರೀ ಆರ್.ಜೆ.ಬಿ. ವಕೀಲರಿಂದಃ**

ಮೇಲಿನ ಪಾಟೀ ಸವಾಲನ್ನು ಅಳವಡಿಸಿಕೊಳ್ಳುವುದಾಗಿ ತಿಳಿಸಿರುತ್ತಾರೆ.

**ಮರು ವಿಚಾರಣೆಃ** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

(ಮುಜಾಫರ್)
ಹಿರಿಯ ಸಿ.ಜೆ. ಮತ್ತು ಪ್ರಧಾನ ಜೆಎಂಎಫ್‌ಸಿ
ಕೆಜಿಎಫ್